# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿಬಿಎಂಪಿ/ಯವ/ಕೊಉ/ಪಿಆರ್/03/2020-21

ಸಹಾಯಕ ಅಭಿಯಂತರರ ಕಛೇರಿ
ಕೊಡಿಗೇಹಳ್ಳಿ ಉಪವಿಭಾಗ, ಯಲಹಂಕ ವಲಯ
9ನೇ ಅಡ್ಡರಸ್ತೆ, ಡಿ ಬ್ಲಾಕ್
ಸಹಕಾರನಗರ, ಬೆಂಗಳೂರು 560092
ದಿನಾಂಕ: 20-02-2021

**ದಿನಾಂಕ: 20-02-2021 ರಂದು ವಾರ್ಡ್ ಸಮಿತಿಯ ಸಭೆಯ ನಡವಳಿಗಳು:-**

**ಸಭೆಗೆ ಹಾಜರಿದ್ದವರು:**

- ಶ್ರೀ ಗುರು, ಕಾರ್ಯಪಾಲಕ ಅಭಿಯಂತರರು, ನೋಡೆಲ್ ಅಧಿಕಾರಿಗಳು ಹಾಗೂ ಅಧ್ಯಕ್ಷರು ವಾರ್ಡ್ ಸಮಿತಿ.
- ಶ್ರೀ ಪ್ರವೀಣ್ ಎ.ಆರ್., ಕಿರಿಯ ಅಭಿಯಂತರರು ಹಾಗೂ ವಾರ್ಡ್ ಸಮಿತಿ ಕಾರ್ಯದರ್ಶಿ
- ಶ್ರೀಮತಿ. ಕವಿತಾ, ಕಿರಿಯ ಆರೋಗ್ಯ ಪರಿವೀಕ್ಷಕರು, ಘನ ತ್ಯಾಜ್ಯ
- ಶ್ರೀ. ಮಂಜುನಾಥ್, ಹಿರಿಯ ಆರೋಗ್ಯ ಪರಿವೀಕ್ಷಕರು, ಅರೋಗ್ಯ
- ಶ್ರೀಮತಿ. ಚಿಂತನ, ಸಹಾಯಕ ಅಭಿಯಂತರರು (ಬೆಂಗಳೂರು ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ) **(BWSSB)**

ವಾರ್ಡ್ ಸಮಿತಿ ಸದಸ್ಯರು

- ಶ್ರೀಮತಿ. ಶಾಂತಕುಮಾರಿ, ಬಾಲಾಜಿ ಬಡಾವಣೆ, ಸದಸ್ಯರು
- ಶ್ರೀ. ಅಂತೋಣಿ ದಾಸ್, ವಸತಿ ಕ್ಷೇಮಾಭಿವೃದ್ದಿ ಸಂಘದ ಸದಸ್ಯರು
- ಶ್ರೀ ಕೃಷ್ಣನ್, ಡಿ ಇನ್‌ಕ್ಲೇವ, ಸದಸ್ಯರು
- ಶ್ರೀಮತಿ ಗೀತಬಾಯಿ, ಮಾರುತಿನಗರ ಸದಸ್ಯರು
- ಶ್ರೀ ಬಿ ಎಸ್ ಆದಿಶೇಷ, ಡಿ ಇನ್‌ಕ್ಲೇವ, ಸದಸ್ಯರು

ವಾರ್ಡ್ ಸಮಿತಿ ಸಭೆಯನ್ನು ವಾರ್ಡ್ ಸಮಿತಿ ಕಾಯದರ್ಶಿಗಳಾದ ಶ್ರೀ. ಪ್ರವೀಣ್ ಎ.ಆರ್. ರವರು ವಾರ್ಡ್ ಸಮಿತಿ ಅಧ್ಯಕ್ಷರು, ವಾರ್ಡ್ ಸಮಿತಿಯ ಸದಸ್ಯರುಗಳು ಹಾಗೂ ಎಲ್ಲಾ ವೃಂದದ ಅಧಿಕಾರಿಗಳನ್ನು ಸ್ವಾಗತಿಸುತ್ತಾ ಸಭೆಯನ್ನು ಪ್ರಾರಂಭಿಸಲಾಯಿತು ಹಾಗೂ ಈ ಹಿಂದಿನ ಸಭೆಯಲ್ಲಿ ಚರ್ಚಿಸಿದ ಸಮಸ್ಯೆಗಳನ್ನು ಪರಿಹರಿಸಲಾಗಿದೆ ಎಂದು ಸಭೆಗೆ ತಿಳಿಸಿದರು.

ಶ್ರೀ ಗುರು, ಕಾ.ಪಾ.ಅ ಹಾಗೂ ನೋಡಲ್ ಅಧಿಕಾರಿ ರವರು ಮಾತನಾಡುತ್ತ ಹಿಂದಿನ ಸಭೆಯ ನಡುವಳಿಗಳ ಬಗ್ಗೆ ಓದಿ ಚರ್ಚಿಸಿ, ಸಮಸ್ಯೆಗಳನ್ನು ಬಗೆಹರಿಸಿರುವ ಕುರಿತು ಹಾಜರಿದ್ದ ಅಧಿಕಾರಿಗಳಿಗೆ

ಮತ್ತು ವಸತಿ ಕ್ಷೇಮಾಭಿವೃದಿ ಸಂಘದ ಸದಸ್ಯರುಗಳ ಜೊತೆಗೆ ಚರ್ಚಿಸಿದರು. ನಂತರ ಹಾಜರಿದ್ದ ಅಧಿಕಾರಿಗಳು ಸಮಸ್ಯೆಗಳನ್ನು ಬಗೆಹರಿಸಿರುವುದಾಗಿ ಸಭೆಗೆ ತಿಳಿಸಿದರು.

ಶ್ರೀಮತಿ. ಶಾಂತಕುಮಾರಿ, ಬಾಲಾಜಿ ಬಡಾವಣೆ, ಸದಸ್ಯರು ಮಾತನಾಡಿ, ಒಂದು ವಾರದಿಂದ ನೀರಿನ ಪೂರೈಕೆ ಹೆಚ್ಚಾಗಿರುವುದರಿಂದ ನೀರಿನ ಸಮಸ್ಯೆ ಬಗೆಹರಿದಿದೆ ಹಾಗೂ ನಿನ್ನೆ ಸುರಿದ ಮಳೆಯಿಂದ ಸದರಿ ಬಡಾವಣೆಯ ದೊಡ್ಡ ಮಳೆ ನೀರು ಚರಂಡಿಯಲ್ಲಿ ನೀರು ಹರಿವು ಹೆಚ್ಚಾಗಿದ್ದು, ಸಮಸ್ಯೆಯನ್ನು ಬಗೆಹರಿಸುವಂತೆ ಸಭೆಗೆ ಮನವಿ ಮಾಡಿದರು.

ಈ ಕುರಿತು ಶ್ರೀ ಗುರು, ಕಾರ್ಯಪಾಲಕ ಅಭಿಯಂತರರು ಹಾಗೂ ನೋಡೆಲ್ ಅಧಿಕಾರಿಗಳು ಮಾತನಾಡಿ ಸದರಿ ಬಡಾವಣೆಯ ಸಮಸ್ಯೆಯನ್ನು ಶ್ರೀ. ಪ್ರವೀಣ್ ಎ.ಆರ್., ವಾರ್ಡ್ ಅಭಿಯಂತರರಿಗೆ ಈ ಹಿಂದೆ ಸದರಿ ಸಮಸ್ಯೆ ಕುರಿತು ಚರ್ಚಿಸಿದಂತೆ ಬೆಂಡ್ ಅಳವಡಿಸಲು ಕ್ರಮ ಕೈಗೊಳುವುದಾಗಿ ಸಭೆಗೆ ತಿಳಿಸಿದಂತೆ ಇದುವರೆಗೂ ಕ್ರಮಕೈಗೊಂಡಿರುವುದಿಲ್ಲ ಈ ಕುರಿತು ಉಪವಿಭಾಗದ ಸ.ಕಾ.ಅ ರವರೊಂದಿಗೆ ಚರ್ಚಿಸಿ ಸಮಸ್ಯೆಯನ್ನು ಪರಿಹರಿಸಲು ಸೂಚಿಸಿದರು.

ಶ್ರೀ ಕೃಷ್ಣನ್, ಡಿ ಇನ್‌ಕ್ಲೇವ, ಸದಸ್ಯರು ಮಾತನಾಡಿ, ಸದರಿ ಬಡಾವಣೆಯಲ್ಲಿ ಸೂಮಾರು 20 ವರ್ಷದ ಬೇವಿನ ಮರ ಬೀಳುವ ಸ್ಥಿತಿಯಲ್ಲಿದ್ದು ಸಾರ್ವಜನಿಕರಿಗೆ ಹಾಗೂ ರಸ್ತೆಗೆ ಅಪಾಯವಿರುವುದರಿಂದ ಮರವನ್ನು ತೆಗಿಸಬೇಕೆಂದು ಸಭೆಗೆ ಮನವಿ ಮಾಡಿದರು.

ಈ ಕುರಿತು ನೋಡಲ್ ಅಧಿಕಾರಿಗಳು, ಶ್ರೀ ರಮೇಶ್, ಬಿಬಿಎಂಪಿ ಅರಣ್ಯ ಇಲಾಖೆ ರವರಿಗೆ ದೂರವಾಣಿ ಮೂಲಕ ಮಾತನಾಡಿ ಮರವನ್ನು ಕೂಡಲೆ ತೆರವುಗೊಳಿಸಲು ಸೂಚಿಸಿದರು.

ಶ್ರೀ ಬಿ ಎಸ್ ಆದಿಶೇಷ, ಡಿ ಇನ್‌ಕ್ಲೇವ, ಸದಸ್ಯರು ಮಾತನಾಡಿ ಸದರಿ ಬಡಾವಣೆಯ ಮೂರನೇ ಅಡ್ಡರಸ್ತೆಯ ಚರಂಡಿಯಲ್ಲಿ ಹೂಳು ತುಂಬಿರುವುದರಿಂದ ಮಳೆನೀರು ಸರಿಯಾಗಿ ಹರಿಯುತ್ತಿರುವುದಿಲ್ಲ, ಅದನ್ನು ಸರಿಪಡಿಸಬೇಕೆಂದು ಸಭೆಗೆ ತಿಳಿಸಿದರು.

ಶ್ರೀ ಪ್ರವೀಣ್ ಎ.ಆರ್., ಕಿರಿಯ ಅಭಿಯಂತರರು ಮಾತನಾಡಿ ಶೀಘ್ರವಾಗಿ ಹೂಳು ತೆಗಿಸಿ ಸಮಸ್ಯೆ ಬಗೆಹರಿಸಲಾಗುವುದೆಂದು ಸಭೆಗೆ ತಿಳಿಸಿದರು.

ಫೆಬ್ರವರಿ 2021ರ 3ನೆ ವಾರದಲ್ಲಿ ನಡೆಯುವ 198 ವಾರ್ಡ್‌ಗಲ ವಾರ್ಡ್ ಕಮಿಟಿ ಸಭೆಯಲ್ಲಿ ವಿಶೇಷವಾಗಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ 2021–22ನೇ ಸಾಲಿನ ಆಯವ್ಯಯ ಸಿದ್ದತೆಯ ಪೂರ್ವದಲ್ಲಿ ಆಯವ್ಯಯಕ್ಕೆ ಪೂರಕವಾದ ಸಲಹೆ/ಸೂಚನೆಗಳ ವಿಷಯಕ್ಕೆಂದು ಮೀಸಲಿಟ್ಟು, ವಿಶೇಷ ವಾರ್ಡ್ ಸಮಿತಿ ಸಭೆಯನ್ನು ನಡೆಸಲು ಹಾಗೂ ಸಭೆಯಲ್ಲಿ ವ್ಯಕ್ತಪಡಿಸುವ ಸಲಹೆ ಸೂಚನೆಗಳನ್ನು ಕ್ರೋಢೀಕರಿಸಿ ನಡವಳಿಯೊಂದಿಗೆ ವಿಶೇಷ ಆಯುಕ್ತರು (ಹಣಕಾಸು) ರವರಿಗೆ ಸಲ್ಲಿಸಲು ಎಲ್ಲಾ ವಾರ್ಡ್ ನೋಡಲ್ ಅಧಿಕಾರಿಗಳಿಗೆ ಸೂಚಿಸಿರುವುದರಿಂದ ನೋಡಲ್ ಅಧಿಕಾರಿಗಳು ಎಲ್ಲಾ ಕ್ಷೇಮಾಭಿವೃದ್ಧಿ ಸಂಘದ ಸದಸ್ಯರಿಗೆ ಸಲಹೆ/ಸೂಚನೆಗಳು ನೀಡಬೇಕೆಂದು ತಿಳಿಸಿದರು.

ಕ್ಷೇಮಾಭಿವೃದ್ಧಿ ಸಂಘದ ಸದಸ್ಯರು ಮಾತನಾಡಿ 'ಡಿ' ಎನ್‌ಕ್ಲೇವ್ ಬಡಾವಣೆಯಲ್ಲಿ ಪುಸ್ತಕ ಸಂಗ್ರಾಲಯ (Library), ಬಾಲಾಜಿ ಬಡಾವಣೆಯಲ್ಲಿ ಫುಟ್‌ಪಾತ್ ನಿರ್ಮಾಣ ಮಾಡಲು ಹಾಗೂ ವಾರ್ಡ್ ಸಂಖ್ಯೆ 08 ರಲ್ಲಿ ಹಾದುಹೋಗುವ ದೊಡ್ಡ ಮಳೆ ನೀರು ಚರಂಡಿ ಉದ್ದಕ್ಕು ಗೋಡೆಯ

ಎತ್ತರವನ್ನು ಹೆಚ್ಚಿಸಲು ಕ್ರಮ ಕೈಗೊಳ್ಳುವಂತೆ ಮನವಿಯನ್ನು ಸಲ್ಲಿಸಿದರು. ನಂತರ ನೋಡಲ್ ಅಧಿಕಾರಿಗಳು ಮಾತನಾಡಿ ಈ ಕುರಿತು ಪರಿಶೀಲಿಸಿ ಹಾಗೂ ವರದಿ ಸಲ್ಲಿಸುವಂತೆ ಶ್ರೀ. ಪ್ರವೀಣ್ ಎ.ಆರ್., ವಾರ್ಡ್ ಅಭಿಯಂತರರಿಗೂ ಹಾಗೂ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಅಂತಿಮವಾಗಿ ಶ್ರೀ ಗುರು, ನೋಡಲ್ ಅಧಿಕಾರಿಯವರು ಈ ಮೇಲ್ಕಂಡ ಅಂಶಗಳ ಬಗ್ಗೆ ವಿವರವಾಗಿ ಅಧಿಕಾರಿಗಳಿಗೆ ನಿರ್ದೇಶನ ನೀಡಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಲು ಸೂಚಿಸಿದರು ನಂತರ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯ ಗೊಳಿಸಲಾಯಿತು.

(ಪ್ರವೀಣ್ ಎ.ಆರ್.)
ಕಾರ್ಯದರ್ಶಿಗಳು ಮತ್ತು
ಕಿರಿಯ ಅಭಿಯಂತರರು
ವಾರ್ಡ್ 8, ಕೊಡಿಗೇಹಳ್ಳಿ ಉಪ ವಿಭಾಗ

20/2/21
(ಶ್ರೀ ಗುರು)
ಕಾರ್ಯಪಾಲಕ ಅಭಿಯಂತರರು ಹಾಗೂ
ವಾರ್ಡ್ ಸಮಿತಿ ಅಧ್ಯಕ್ಷರು
ವಾರ್ಡ್ ಸಂಖ್ಯೆ:08

ಪ್ರತಿಯನ್ನು:-

1. ಮಾನ್ಯ ಆಡಳಿತ ಅಧಿಕಾರಿಗಳು, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
3. ಮಾನ್ಯ ಜಂಟಿ ಆಯುಕ್ತರು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
4. ಆರೋಗ್ಯಾಧಿಕಾರಿಗಳು, ಯಲಹಂಕ ವಲಯ, ಬಿಬಿಎಂಪಿ ರವರ ಮಾಹಿತಿಗಾಗಿ ಕಳುಹಿಸಿದೆ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ರವರ ಮಾಹಿತಿಗಾಗಿ ಕಳುಹಿಸಿದೆ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೊಡಿಗೇಹಳ್ಳಿ ಉಪವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಕಳುಹಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಕಳುಹಿಸಿದೆ.
8. ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ರವರ ಮಾಹಿತಿಗಾಗಿ ಕಳುಹಿಸಿದೆ.
9. ವಾರ್ಡ್ ಕಮಿಟಿ ಸದಸ್ಯರುಗಳ ಮಾಹಿತಿಗಾಗಿ ಕಳುಹಿಸಿದೆ.
10. ಕಛೇರಿ ಕಡತಕ್ಕೆ.